Government of Karnataka

Karnataka Examinations Authority

**No.** ED/KEA/ADMN/CR-13 /2025 **Date:** 21-06-2025

# NOTIFICATION

## PGET-2025 - Admission to Post Graduate Dental courses for the year 2025-26 in the state of Karnataka

1. KEA is inviting applications online for admissions to PG Dental courses from the eligible candidates who have qualified in NEET MDS – 2025 for the year 2025-26 for the available PG Dental Degree courses in Government Dental colleges, Government Quota seats in Private and Minority Dental Colleges and Private seats in Private Dental colleges (KPCF, KRLMPCA, AMPCK and Private Universities) located in the State of Karnataka for the academic year 2025-26.
2. The candidates who have scored **more than or equal** to the prescribed minimum score in NEET MDS-2025 only are eligible to register and apply online for PG Dental courses for the year 2025-26.
3. Non-Karnataka candidates will not be eligible for reservation. Hence, in the NEET MDS - 2025 examination, if they have scored the required minimum **50th percentile or above,** fixed for 'GENERAL (UR)' category as per the qualifying criteria, then only they are eligible to register for admissions through KEA or for any other seats in the State of Karnataka. Please note that SC/ST/OBC eligibility criteria are applicable to Karnataka SC/ST/OBC candidates only.
4. Eligible candidates can register and apply online for PGET-2025 from 2.00 pm on 24-06-2025 up to 11.59 pm on 29-06-2025. Fee has to be paid by the registered and applied candidate on or before 30-06-2025 – 6.00 pm.
5. Registration fees, schedule for verification of documents, original documents to be produced for verification and other details will be hosted on the KEA Website. Interested eligible candidates can register and apply online and appear for document verification as per conditions and schedule. (Read the conditions hosted on KEA Website before appearing for verification – candidates claimed clause 'a' or clause 'y' need NOT to appear for verification)
6. Information Bulletin-2025 detailing admission eligibility criteria and other details are hosted on the KEA Website https://cetonline.karnataka.gov.in/kea/ for the information of the candidates. Before registering online for admission to PG Dental courses in the state of Karnataka, applicants are hereby informed to read Information Bulletin PGNEET-2025 and understand the eligibility conditions, educational qualification, classification of seats (different types of category of seats) and eligibility to claim such seats.
7. Mere qualifying in NEET MDS-2025 does not confer any right on the candidate for admission unless the candidate fulfils eligibility conditions / submits the documents / certificates. Further, only the candidates who complete the registration process including document verification are eligible for PG Dental seats in Government / Private Colleges in Karnataka.
8. For more details please visit KEA Website https://cetonline.karnataka.gov.in/kea/

NOTE: As per NMC, New Delhi letter dated 24-07-2023; all the rounds of counseling including Stray Vacancy Round will be conducted only by KEA in online mode, all the PG NEET qualified candidates are hereby advised to register online and complete the document verification process in KEA to become eligible for admission to PG Dental Courses in the State of Karnataka.

(H Prasanna IAS),

Executive Director.

ಕರ್ನಾಟಕ ಸರ್ಕಾರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.13/2025

ದಿನಾಂಕ: 21-06-2025

ಅಧಿಸೂಚನೆ

**ಪಿಜಿಇಟಿ-2025 – ಕರ್ನಾಟಕದಲ್ಲಿನ ಸ್ನಾತಕೋತ್ತರ ದಂತವೈದ್ಯಕೀಯ ಪದವಿ ಕೋರ್ಸುಗಳ ಪ್ರವೇಶ 2025-26**

– –

1. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು NEET MDS 2025 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗು ಅರ್ಹತಾ ಮಾನದಂಡಗಳನ್ನು ಪೂರೈಸುವ ಅರ್ಹ ಅಭ್ಯರ್ಥಿಗಳಿಂದ 2025-26 ನೇ ಸಾಲಿಗೆ ಕರ್ನಾಟಕ ರಾಜ್ಯದಲ್ಲಿನ ಸ್ನಾತಕೋತ್ತರ ಪದವಿ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಅಂದರೆ ಸರ್ಕಾರಿ ದಂತವೈದ್ಯಕೀಯ ಕಾಲೇಜುಗಳ ಸೀಟುಗಳು, ಖಾಸಗಿ ಮತ್ತು ಅಲ್ಪ ಸಂಖ್ಯಾತ ದಂತವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಾಗುವ ಸರ್ಕಾರಿ ಕೋಟದ ಸೀಟುಗಳು ಮತ್ತು ಖಾಸಗಿ ಮತ್ತು ಅಲ್ಪ ಸಂಖ್ಯಾತ ದಂತವೈದ್ಯಕೀಯ ಕಾಲೇಜುಗಳಲ್ಲಿ ಖಾಸಗಿ ಸೀಟುಗಳ (KPCF, KRLMPCA, AMPCK and Private Universities) ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ.

2. NEET MDS 2025 ರಲ್ಲಿ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳು ಮಾತ್ರ ಸ್ನಾತಕೋತ್ತರ **ದಂತವೈದ್ಯಕೀಯ** ಕೋರ್ಸುಗಳ ಪ್ರವೇಶಕ್ಕೆ ನೊಂದಣಿ ಮಾಡಿಕೊಳ್ಳಲು ಅರ್ಹರಿರುತ್ತಾರೆ.

3. ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ NEET-MDS 2025 ರಲ್ಲಿ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50th Percentile) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗು ಪ್ರವೇಶಕ್ಕಾಗಿ ನೊಂದಣಿಯನ್ನು ಮಾಡಿ ಕೊಳ್ಳಬಹುದಾಗಿದೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

4. **ಆಸಕ್ತ ಅರ್ಹ ಅಭ್ಯರ್ಥಿಗಳು ಪಿಜಿಇಟಿ NEET-MDS 2025 ಕ್ಕೆ, ದಿನಾಂಕ 24-06-2025 ರ ಮ.2.00 ರಿಂದ 29-06-2025 ರ ರಾ.11.59 ರ ವರೆಗೆ ಆನ್‌ಲೈನ್ ಮೂಲಕ ನೊಂದಣಿ ಮಾಡಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ನೊಂದಣಿ ಮಾಡಿ ಅರ್ಜಿ ಸಲ್ಲಿಸಿದ ನಂತರ ಅಭ್ಯರ್ಥಿಗಳು 30-06-2025 ರ ಸಂಜೆ 6.00 ರ ವರೆಗೆ ಶುಲ್ಕ ಪಾವತಿಸಬಹುದಾಗಿರುತ್ತದೆ.**

5. ನೊಂದಣಿ ಶುಲ್ಕ, ದಾಖಲಾತಿ ಪರಿಶೀಲನೆಯ ವೇಳಾಪಟ್ಟಿ, ದಾಖಲಾತಿ ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲಾತಿಗಳು, ಹಾಗು ಇತರೆ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿಕೊಂಡು ನೊಂದಣಿ ಮಾಡಿ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿ ಪರಿಶೀಲನೆಗೆ ಹಾಜರಾಗಲು ನಿಗದಿಪಡಿಸಿರುವ ಸೂಚನೆಗಳು ಮತ್ತು ವೇಳಾಪಟ್ಟಿಯ ಅನುಸಾರ ಹಾಜರಾಗಬಹುದು. (ಪರಿಶೀಲನೆಗೆ ಹಾಜರಾಗುವ ಮೊದಲು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನೀಡಲಾದ ಷರತ್ತುಗಳನ್ನು ಓದಿಕೊಂಡು ಭಾಗವಹಿಸಿ – clause 'a' or clause 'y' ಅಭ್ಯರ್ಥಿಗಳು ಪರಿಶೀಲನೆಗೆ ಹಾಜರಾಗುವ ಅಗತ್ಯವಿಲ್ಲ)

6. ವಿವರವಾದ ಅರ್ಹತಾ ಮಾನದಂಡಗಳನ್ನೊಳಗೊಂಡ PGNEET-2025 ಮಾಹಿತಿ ಪುಸ್ತಕ ಅನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿರುತ್ತದೆ. ನೊಂದಣಿ ಮಾಡಿಕೊಳ್ಳುವ ಮೊದಲು ಶೈಕ್ಷಣಿಕ ಅರ್ಹತೆ, ವಿವಿಧ ವರ್ಗಗಳ ಸೀಟುಗಳಿಗೆ ನಿಗದಿಪಡಿಸಿರುವ ಅರ್ಹತಾ ಮಾನದಂಡಗಳು ಮತ್ತು ಅಂತಹ ಸೀಟುಗಳಿಗೆ ನಿಗದಿಪಡಿಸಿರುವ ಅಭ್ಯರ್ಥಿಯ ಅರ್ಹತೆ ಹಾಗು ಇತ್ಯಾದಿ ಮಾನದಂಡಗಳನ್ನು ಓದಿಕೊಂಡು ನೊಂದಣಿ ಮಾಡಿಕೊಳ್ಳಲು ಸೂಚಿಸಿದೆ.

7. NEET MDS 2025 ನಲ್ಲಿ ಅರ್ಹತೆಯನ್ನು ಪಡೆದ ಮಾತ್ರಕ್ಕೆ, ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ / ನಿಗದಿತ ಪ್ರಮಾಣ ಪತ್ರಗಳನ್ನು ದಾಖಲಾತಿ ಪರಿಶೀಲನೆಗೆ ಹಾಜರು ಪಡಿಸದಿದ್ದಲ್ಲಿ ಅಭ್ಯರ್ಥಿಯು ಪ್ರವೇಶಾತಿಗಾಗಿ ಯಾವುದೇ ಹಕ್ಕನ್ನು ಹೊಂದುವುದಿಲ್ಲ. ಮುಂದುವರಿದು, ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಯಶಸ್ವಿಯಾಗಿ ಪೂರೈಸುವ ಅಭ್ಯರ್ಥಿಗಳು ಮಾತ್ರ ಕರ್ನಾಟಕದಲ್ಲಿನ ಸರ್ಕಾರಿ / ಖಾಸಗಿ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.

8. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ https://cetonline.karnataka.gov.in/kea/ ಅನ್ನು ನೋಡಲು ಕೋರಿದೆ.

**ಸೂಚನೆ:** ಎನ್‌ಎಮ್‌ಸಿ ಅವರ ಸೂಚನೆ ದಿನಾಂಕ 24-07-2023 ರ ಅನ್ವಯ ಸ್ಟೇ ವೇಕೆನ್ಸಿ ಸುತ್ತಿನ ಸೀಟು ಹಂಚಿಕೆ ಸೇರಿದಂತೆ ಎಲ್ಲಾ ಸುತ್ತಿನ ಸೀಟು ಹಂಚಿಕೆಯನ್ನು ಆನ್‌ಲೈನ್ ಮೂಲಕ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದಲೇ ನಡೆಸಲಾಗುವುದರಿಂದ, ಪಿಜಿ ನೀಟ್ ನಲ್ಲಿ ಅರ್ಹತೆ ಪಡೆದ ಎಲ್ಲಾ ಅಭ್ಯರ್ಥಿಗಳು ಕರ್ನಾಟಕ ರಾಜ್ಯದಲ್ಲಿನ ಪಿಜಿ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗಲು ಕೆಇಎ ನಲ್ಲಿ ಆನ್‌ಲೈನ್ ಮೂಲಕ ನೊಂದಾಯಿಸಿ, ದಾಖಲೆಗಳ ಪರಿಶೀಲನಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದೆ.

(ಹೆಚ್. ಪ್ರಸನ್ನ, ಭಾ.ಆ.ಸೇ.)

ಕಾರ್ಯನಿರ್ವಾಹಕ ನಿರ್ದೇಶಕರು